# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 106 (1218) |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 21.08.2025 |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದ ನೇಮಕಾತಿ ಪ್ರಾಧಿಕಾರಗಳಾದ ಕೆಪಿಎಸ್‌ಸಿ, ಕೆಇಎ, ಕೆಎಸ್‌ಪಿ ಹಾಗೂ ಇತರ ಪ್ರಾಧಿಕಾರಗಳು ನೇಮಕಾತಿಯಲ್ಲಿ 371(ಜೆ)ಗೆ ಸಂಬಂಧಿಸಿದ ಸರ್ಕಾರದ ಸುತ್ತೋಲೆಗಳಂತೆ ನೇಮಕಾತಿ ಮಾಡದೆ ಮನಸ್ಸಿಗೆ ಬಂದಂತೆ ವಿಭಿನ್ನ ನಿಯಮಗಳಂತೆ ನೇಮಕಾತಿ ಮಾಡಿ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಅನ್ಯಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | 371(ಜೆ) ರಡಿ ನೇಮಕಾತಿಗೆ ಸಂಬಂಧಿಸಿದಂತೆ 2015 ರಿಂದ ಇಲ್ಲಿಯವರೆಗೆ ಹಲವಾರು ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 3 ಹೈಕಕೋ 2019, ದಿನಾಂಕ 15.06.2022ರಲ್ಲಿ, ವಿವಿಧ ನೇಮಕಾತಿ ಪ್ರಾಧಿಕಾರಗಳು ಇನ್ನು ಮುಂದೆ ಮಿಕ್ಕುಳಿದ ವೃಂದ ಮತ್ತು ಸ್ಥಳೀಯ ವೃಂದದಲ್ಲಿ ಲಭ್ಯವಿರುವ ನೇರ ನೇಮಕಾತಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸುವ ಅಧಿಸೂಚನೆಯನ್ನು ಪ್ರತ್ಯೇಕವಾಗಿ ಹೊರಡಿಸಿ, ಪ್ರತ್ಯೇಕ ನೇಮಕಾತಿ ಪ್ರಕ್ರಿಯೆ ಕೈಗೊಂಡು ಆಯ್ಕೆಯನ್ನು ಅಂತಿಮಗೊಳಿಸುವಂತೆ ತಿಳಿಸಲಾಗಿರುತ್ತದೆ.<br><br>ಆದರೆ ಕೆಲವು ಇಲಾಖೆಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಸುತ್ತೋಲೆ ಸಂಖ್ಯೆ: ಸಿಆಸುಇ 3 ಹೈಕಕೋ 2018 ದಿನಾಂಕ: 06.06.2020ರ ಸುತ್ತೋಲೆಯಂತೆ ಒಂದೇ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಒಂದೇ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಿರುವ ಪ್ರಕರಣಗಳಲ್ಲಿ ಹೈದರಾಬಾದ್-ಕರ್ನಾಟಕ ಅಭ್ಯರ್ಥಿಗಳಿಗೆ ಅನ್ಯಾಯವಾಗುತ್ತಿರುವುದನ್ನು ತಡೆಯಲು ದಿನಾಂಕ 26.05.2025ರಂದು ಅನುಚ್ಛೇಧ 371(ಜೆ) ಅನುಷ್ಠಾನದ ಮೇಲ್ವಿಚಾರಣೆಗಾಗಿ ರಚಿಸಲಾಗಿರುವ ಸಚಿವ ಸಂಪುಟ ಉಪ ಸಮಿತಿಯು ತೆಗೆದುಕೊಂಡ ತೀರ್ಮಾನಗಳಂತೆ ಸುತ್ತೋಲೆ ಸಂಖ್ಯೆ: ಸಿಆಸುಇ 77 ಹೈಕಕೋ 2025, ದಿನಾಂಕ 03.06.2025ನ್ನು ಹೊರಡಿಸಲಾಗಿದೆ.<br>(ಸುತ್ತೋಲೆಯ ಪ್ರತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ).<br><br>ಮುಂದುವರೆದು, ಮೇಲಿನ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ, ತಪ್ಪಿದಲ್ಲಿ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಸಹ ತಿಳಿಸಲಾಗಿರುತ್ತದೆ |
| ಆ) | ಕೆಪಿಎಸ್‌ಸಿ, ಯು ಕಲ್ಯಾಣ ಕರ್ನಾಟಕ ಹಾಗೂ ಉಳಿಕೆ ಮೂಲವೃಂದದ ಹುದ್ದೆಗಳಿಗೆ ಪ್ರತ್ಯೇಕವಾಗಿ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಿ ನೇಮಕಾತಿ ಮಾಡಿಕೊಳ್ಳುತ್ತಿದೆ. ಆದರೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಮಾತ್ರ ಕಲ್ಯಾಣ ಕರ್ನಾಟಕ ಹಾಗೂ ಉಳಿಕೆ ಮೂಲ ವೃಂದದ ಹುದ್ದೆಗಳಿಗೆ ಪ್ರತ್ಯೇಕವಾಗಿ ನೇಮಕಾತಿ ಹೊರಡಿಸದೇ ಒಂದೇ ಅಧಿಸೂಚನೆಯನ್ನು ಹೊರಡಿಸಿ ನೇಮಕಾತಿ ಮಾಡಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಈ ಬಗ್ಗೆ, ನಿಯಮ ಉಲ್ಲಂಘಿಸಿದ ಅಧಿಕಾರಿಗಳ ಮೇಲೆ ಇಲಾಖೆ ಕೈಗೊಂಡ ಕ್ರಮಗಳೇನು;(ವಿವರ ನೀಡುವುದು) | |

| | | |
|---|---|---|
| (ಈ) | ಈ ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಈಗಾಗಲೇ ನಡೆಸಿರುವ ಎಲ್ಲಾ ಹುದ್ದೆಗಳ ನೇಮಕಾತಿಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಅನ್ಯಾಯವಾಗಿದ್ದು, ಇದಕ್ಕೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳ ಹಲವಾರು ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳಿಗೆ ಕೋರ್ಟ್‌ನಲ್ಲಿ ಪ್ರಕರಣಗಳು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿವೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ರೀತಿ ಕ್ರಮಗಳನ್ನು ತೆಗೆದುಕೊಂಡಿದೆ ಮತ್ತು ತೆಗೆದುಕೊಳ್ಳಲಾಗುವುದು; | 371(ಜೆ) ರಡಿ ಕೈಗೊಂಡ ಹಲವು ನೇಮಕಾತಿ ಪ್ರಕ್ರಿಯೆಗಳ ಸಂಬಂಧ ನ್ಯಾಯಾಲಯದಲ್ಲಿ ಪ್ರಕರಣಗಳು ದಾಖಲಾಗಿರುತ್ತವೆ. |
| (ಉ) | ಇದೊಂದು ಗಂಭೀರ ವಿಷಯವಾಗಿರುವುದರಿಂದ ಈ ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಈಗಾಗಲೇ ಮಾಡಿರುವ ಮತ್ತು ಪ್ರಸ್ತುತ ಚಾಲ್ತಿಯಲ್ಲಿರುವ ನೇಮಕಾತಿಗಳನ್ನು ರದ್ದುಗೊಳಿಸಿ ಮರು ನೇಮಕಾತಿ ಮಾಡುವಂತೆ ಮಾಡಲು ಇಲಾಖೆ ಯಾವ ಕ್ರಮಗಳನ್ನು ಕೈಗೊಳ್ಳುತ್ತದೆ; ಇಲಾಖೆ ಈ ಬಗ್ಗೆ ಕ್ರಮ ಕೈಗೊಳ್ಳದಿದ್ದರೆ ಕೋರ್ಟಿಗೆ ಮೊರೆ ಹೋಗಲು ಅವಕಾಶ ಮಾಡಿಕೊಟ್ಟಂತಾಗುತ್ತದೆಯಲ್ಲವೇ?<br>(ಈ ಬಗ್ಗೆ ಸರ್ಕಾರದ ಸೂಕ್ತ ನಿಲುವನ್ನು ತಿಳಿಸುವುದು) | *ಒಂದೇ ಪರೀಕ್ಷೆ ನಡೆಸಿ ಅಂತಿಮ ಆಯ್ಕೆಪಟ್ಟಿ ಪ್ರಕಟಿಸದೇ ಇರುವ* ನೇಮಕಾತಿ ಪ್ರಕ್ರಿಯೆಗಳಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸರ್ಕಾರದಿಂದ ಹೊರಡಿಸಲಾಗಿರುವ ದಿನಾಂಕ 01.02.2023ರ ಸುತ್ತೋಲೆಯನ್ನು ಪ್ರಶ್ನಿಸಿ ಹಲವಾರು ಪ್ರಕರಣಗಳು ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿ ಮತ್ತು ಮಾನ್ಯ ಉಚ್ಚ ನ್ಯಾಯಾಲಯಗಳಲ್ಲಿ ದಾಖಲಾಗಿರುತ್ತವೆ.<br><br>ಸದರಿ ಪ್ರಕರಣಗಳಲ್ಲಿ ಸರ್ಕಾರದ ಕ್ರಮಗಳನ್ನು ಸಮರ್ಥಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗಿದ್ದು, ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪನ್ನು ನಿರೀಕ್ಷಿಸಲಾಗುತ್ತಿದೆ.<br><br>ಈ ಪ್ರಕರಣಗಳು ನ್ಯಾಯಾಲಯದ ಮುಂದೆ ಬಾಕಿಯಿರುವುದರಿಂದ, ಸದರಿ ವಿಷಯವು ವಿಚಾರಣಾಧೀನ (sub-judice) ಆಗಿರುತ್ತವೆ. ಆದುದರಿಂದ, ಈ ನೇಮಕಾತಿಗಳನ್ನು ರದ್ದುಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಿಆಸುಇ 110 ಪ್ರೈಕಕೋ 2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ

ಅನುಬಂಧ

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 77 ಹೈಕಕೋ 2025

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:03.06.2025

## ಸುತ್ತೋಲೆ

ವಿಷಯ: ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದದಲ್ಲಿನ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂದರ್ಭದಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳು ಅನುಸರಿಸಬೇಕಾದ ಕ್ರಮಗಳ ಬಗ್ಗೆ.

ಉಲ್ಲೇಖ:1. ಸುತ್ತೋಲೆ ಸಂಖ್ಯೆ: ಸಿಆಸುಇ 03 ಹೈಕಕೋ 2019, ದಿನಾಂಕ 15.06.2022
2. ಸುತ್ತೋಲೆ ಸಂಖ್ಯೆ: ಸಿಆಸುಇ 03 ಹೈಕಕೋ 2019, ದಿನಾಂಕ 01.02.2023.

*********

ಕಲ್ಯಾಣ ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಿರುವ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳು ಹಾಗೂ ಆಯ್ಕೆ ಪ್ರಾಧಿಕಾರಗಳು ಪಾಲಿಸಬೇಕಾದ ವಿಧಿವಿಧಾನಗಳ ಬಗ್ಗೆ ಅನೇಕ ಸುತ್ತೋಲೆಗಳನ್ನು ಹೊರಡಿಸಿದ್ದಾಗ್ಯೂ ಆಯ್ಕೆ ಪಟ್ಟಿ ತಯಾರಿಸುವಲ್ಲಿ ಆಯ್ಕೆ/ನೇಮಕಾತಿ ಪ್ರಾಧಿಕಾರಗಳು ಸದರಿ ಸುತ್ತೋಲೆಗಳ ಸೂಚನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಗೊಂದಲಗಳು ಉಂಟಾಗುತ್ತಿದ್ದು, ಮುಖ್ಯವಾಗಿ ಸರ್ಕಾರದ ದಿನಾಂಕ:15.06.2022ರ ಸುತ್ತೋಲೆಯಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳು ಸ್ಥಳೀಯ ಹಾಗೂ ಮಿಕ್ಕುಳಿದ ವೃಂದದ ಹುದ್ದೆಗಳಿಗೆ ಪ್ರತ್ಯೇಕ ಅರ್ಜಿ ಆಹ್ವಾನಿಸಿ ಪ್ರತ್ಯೇಕವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ ಪ್ರತ್ಯೇಕವಾಗಿ ನೇಮಕಾತಿ ಪ್ರಕ್ರಿಯೆ ಕೈಗೊಂಡು ಆಯ್ಕೆ ಪಟ್ಟಿಗಳನ್ನು ಅಂತಿಮಗೊಳಿಸಲು ಸೂಚಿಸಿದ್ದಾಗ್ಯೂ ಸದರಿ ಸೂಚನೆಗಳನ್ನು ಪಾಲಿಸದೇ ಅನೇಕ ಪ್ರಕರಣಗಳಲ್ಲಿಒಂದೇ ಅಧಿಸೂಚನೆ ಹೊರಡಿಸಿ, ಒಂದೇ ಪರೀಕ್ಷೆ ನಡೆಸಿರುವ ಹಾಗೂ ಪ್ರತ್ಯೇಕ ಅಧಿಸೂಚನೆ ಹೊರಡಿಸಿ ಒಂದೇ ಪರೀಕ್ಷೆ ನಡೆಸಿರುವ ಪ್ರಕರಣಗಳು ಬೆಳಕಿಗೆ ಬಂದಿರುತ್ತವೆ.

ಈ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯಲ್ಲಿ ಪಾಲಿಸಬೇಕಾದ ಅಂಶಗಳ ಬಗ್ಗೆ, ಈ ಕೆಳಕಂಡಂತೆ ಸ್ಪಷ್ಟೀಕರಣ ನೀಡಲಾಗಿದೆ.

...2

| ಕ್ರ.ಸಂ | ವಿಷಯ | ಅನುಸರಿಸಬೇಕಾದ ಕ್ರಮ |
|---|---|---|
| 1. | ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ ಹುದ್ದೆಗಳ ನೇಮಕಾತಿಗೆ **ಒಂದೇ ನೇಮಕಾತಿ ಅಧಿಸೂಚನೆ ಹೊರಡಿಸಿ ಒಂದೇ ಪರೀಕ್ಷೆ ಕೈಗೊಂಡಾಗ** | ಸ್ಥಳೀಯ ಅಭ್ಯರ್ಥಿಗಳಿಂದ ಪಡೆಯಲಾಗಿರುವ ಆಯ್ಕೆಯನ್ನು ಪರಿಗಣಿಸದೇ, ಮೆರಿಟ್ ಪಟ್ಟಿಯಿಂದ ಆಯ್ಕೆ ಪಟ್ಟಿ ತಯಾರಿಸುವಲ್ಲಿ ಸ್ಥಳೀಯ ಅಭ್ಯರ್ಥಿಗಳನ್ನು ಮೊದಲಿಗೆ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಪರಿಗಣಿಸಿ ಆಯ್ಕೆ ಪಟ್ಟಿ ತಯಾರಿಸುವುದು. ತದನಂತರ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆ ಪರಿಗಣಿಸಿ ಅರ್ಹ ಸ್ಥಳೀಯ ಅಭ್ಯರ್ಥಿಗಳ ಆಯ್ಕೆ ಪಟ್ಟಿ ತಯಾರಿಸುವುದು. |
| 2. | ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ ಹುದ್ದೆಗಳ ನೇಮಕಾತಿಗೆ **ಪ್ರತ್ಯೇಕ ನೇಮಕಾತಿ ಅಧಿಸೂಚನೆ ಹೊರಡಿಸಿ ಒಂದೇ ಪರೀಕ್ಷೆ ಕೈಗೊಂಡಾಗ** | ಸ್ಥಳೀಯ ಅಭ್ಯರ್ಥಿಗಳಿಂದ ಪಡೆಯಲಾಗಿರುವ ಆಯ್ಕೆಯನ್ನು ಪರಿಗಣಿಸದೇ, ಮೆರಿಟ್ ಪಟ್ಟಿಯಿಂದ ಆಯ್ಕೆ ಪಟ್ಟಿ ತಯಾರಿಸುವಲ್ಲಿ ಸ್ಥಳೀಯ ಅಭ್ಯರ್ಥಿಗಳನ್ನು ಮೊದಲಿಗೆ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆದುರಾಗಿ ಪರಿಗಣಿಸಿ ಆಯ್ಕೆ ಪಟ್ಟಿ ತಯಾರಿಸುವುದು. ತದನಂತರ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ಹುದ್ದೆಗಳಿಗೆ ಪರಿಗಣಿಸಿ ಅರ್ಹ ಸ್ಥಳೀಯ ಅಭ್ಯರ್ಥಿಗಳ ಆಯ್ಕೆ ಪಟ್ಟಿ ತಯಾರಿಸುವುದು. |
| 3. | ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ ಹುದ್ದೆಗಳ ನೇಮಕಾತಿಗೆ **ಪ್ರತ್ಯೇಕ ನೇಮಕಾತಿ ಅಧಿಸೂಚನೆ ಹೊರಡಿಸಿ ಪ್ರತ್ಯೇಕ ಪರೀಕ್ಷೆ ಕೈಗೊಂಡಾಗ** | ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದದಲ್ಲಿ ಲಭ್ಯವಿರುವ ನೇರ ನೇಮಕಾತಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸುವ ಅಧಿಸೂಚನೆಯನ್ನು ಪ್ರತ್ಯೇಕವಾಗಿ ಹೊರಡಿಸಿ, ಪ್ರತ್ಯೇಕವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ, ಪ್ರತ್ಯೇಕವಾಗಿ ನೇಮಕಾತಿ ಪ್ರಕ್ರಿಯೆ ಕೈಗೊಂಡು ಪ್ರತ್ಯೇಕ ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸುವುದು. |

ಮುಂದುವರೆದು, ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ ಹುದ್ದೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಈಗಾಗಲೇ ನೀಡಿರುವ ಸೂಚನೆಗಳಂತೆ ಕಡ್ಡಾಯವಾಗಿ ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ ಹುದ್ದೆಗಳ ನೇಮಕಾತಿಗೆ ಪ್ರತ್ಯೇಕ ನೇಮಕಾತಿ ಅಧಿಸೂಚನೆ ಹೊರಡಿಸಿ ಪ್ರತ್ಯೇಕ ಪರೀಕ್ಷೆಯನ್ನು ಕೈಗೊಳ್ಳಲು ಸೂಚಿಸಿದೆ. ತಪ್ಪಿದಲ್ಲಿ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

3/6/25

(ರವಿ ಜಿ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**ಪ್ರತಿ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2. ಎಲ್ಲಾ ಇಲಾಖಾ ಮುಖ್ಯಸ್ಥರು.
3. ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ.
4. ಜಿಲ್ಲಾಧಿಕಾರಿಗಳು, ಕಲಬುರಗಿ/ರಾಯಚೂರು/ಕೊಪ್ಪಳ/ ಯಾದಗಿರಿ/ ಬಳ್ಳಾರಿ/ ಬೀದರ್ ಜಿಲ್ಲೆ.
5. ಮುಖ್ಯ ಕಾರ್ಯನಿರ್ವಹಣಾಧಿಗಳು. ಕಲಬುರಗಿ/ ರಾಯಚೂರು/ ಕೊಪ್ಪಳ /ಯಾದಗಿರಿ /ಬಳ್ಳಾರಿ/ ಬೀದರ್ ಜಿಲ್ಲೆ.
6. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
7. ಆಡಳಿತಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ. ಬೆಂಗಳೂರು.
8. ಹೆಚ್ಚುವರಿ ಪ್ರತಿ / ಶಾಖಾ ರಕ್ಷಾ ಕಡತ.